...SEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 3/2/2021

**ವಿಪಕ್ಷಗಳ ತರಾಟೆ** **ಶಿವಮೊಗ್ಗ ಸ್ಫೋಟ ನ್ಯಾಯಾಂಗ ತನಿಖೆಗಿಲ್ಲ: ಸರ್ಕಾರ | ಕಾಂಗ್ರೆಸ್, ಜೆಡಿಎಸ್ ಸದಸ್ಯರ ಆಕ್ರೋಶ**

# ಸದನದಲ್ಲಿ ಗಣಿ ಸ್ಫೋಟ ಚರ್ಚೆ, ಕಾಂಗ್ರೆಸ್, ದಳ ಸಭಾತ್ಯಾಗ

3/2/21

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

ಶಿವಮೊಗ್ಗದ ಹುಣಸೋಡು ಸ್ಫೋಟ ಪ್ರಕರಣ ಸಂಬಂಧ ಎಡಿಜಿಪಿ ಮತ್ತು ಕಂದಾಯ ಇಲಾಖೆ ಆಯುಕ್ತರಿಂದ ತನಿಖೆ ನಡೆಸುವ ನಿಲುವು ಬದಲಿಸದ ಹಾಗೂ ನ್ಯಾಯಾಂಗ ತನಿಖೆ ನಡೆಸಬೇಕು ಎಂಬ ತಮ್ಮ ಬೇಡಿಕೆಗೆ ಮಣಿಯದ ಸರ್ಕಾರದ ಧೋರಣೆ ವಿರೋಧಿಸಿ ಪ್ರತಿಪಕ್ಷಗಳು ಮಂಗಳವಾರ ಸಭಾತ್ಯಾಗ ನಡೆಸಿದವು.

ಕಾಂಗ್ರೆಸ್ ಹಾಗೂ ಜೆಡಿಎಸ್ ಸದಸ್ಯರು ಸ್ಫೋಟ ಪ್ರಕರಣ ಕುರಿತು ನಿವೃತ್ತ ನ್ಯಾಯಮೂರ್ತಿಗಳ ಮೂಲಕ ತನಿಖೆ ನಡೆಸಬೇಕು ಎಂದು ಪಟ್ಟು ಹಿಡಿದರೂ ಆಡಳಿತ ಪಕ್ಷ ಜಗಲಿಲ್ಲ. ಈ ಕುರಿತು ಸದನದಲ್ಲಿ ಪ್ರತಿಕ್ರಿಯಿಸಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸದರಿ ಸ್ಫೋಟ ಘಟನೆ ಸಂಬಂಧ ಎಡಿಜಿಪಿ ಮತ್ತು ಕಂದಾಯ ಇಲಾಖೆ ಆಯುಕ್ತರ ನೇತೃತ್ವದಲ್ಲಿ ಎರಡು ತನಿಖೆ ನಡೆಯುತ್ತಿದೆ. ತನಿಖಾ ವರದಿ ಬಂದ ನಂತರ ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎನ್ನುವ ಮೂಲಕ ನ್ಯಾಯಾಂಗ ತನಿಖೆಯ



ಬೇಡಿಕೆಯನ್ನು ತಳ್ಳಿ ಹಾಕಿದರು. ಇದನ್ನು ಕಟು ಶಬ್ದಗಳಲ್ಲಿ ಟೀಕಿಸಿದ ಪ್ರತಿಪಕ್ಷಗಳ ಸದಸ್ಯರು ಸಭಾತ್ಯಾಗ ಮಾಡಿದರು.

ಕಾಂಗ್ರೆಸ್‌ನ ಬಿ.ಕೆ. ಹರಿಪ್ರಸಾದ್ ಅವರು, ಹುಣಸೋಡುವಿನಲ್ಲಿ ಅಂದು 1,350 ಕೆ.ಜಿ.ಯಷ್ಟು ಸ್ಫೋಟಕಗಳು ಸ್ಫೋಟಗೊಂಡಿವೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿವೆ. ವಿವಿಐಪಿ ಜಿಲ್ಲೆ ಶಿವಮೊಗ್ಗದಲ್ಲಿ ಇಷ್ಟೊಂದು ಪ್ರಮಾಣದ ಸ್ಫೋಟಕಗಳು ಬಂದಿವೆ. ಇದು ಎಲ್ಲಿಗೆ ಹೋಗುತ್ತಿತ್ತು ಎಂಬುದು ರಾಜ್ಯದ ಜನತೆಗೆ ತಿಳಿಯಬೇಕು. ಸ್ಫೋಟ ಘಟನೆಯಲ್ಲಿ ಆರು ಮಂದಿ ಸತ್ತಿದ್ದಾರೆ. ಗಣಿ ಸಚಿವರು ಮಕ್ಕಳ ಪಾಠ ಒಪ್ಪಿಸುವ ರೀತಿ ಉತ್ತರ ನೀಡಿದ್ದಾರೆ. ಆದರೆ, ಸ್ಫೋಟಕ್ಕೆ ಕಾರಣವೇನು ಎಂಬುದನ್ನು ಹೇಳಿಲ್ಲ. ಮುಖ್ಯಮಂತ್ರಿಗಳ ಜಿಲ್ಲೆಯಲ್ಲೇ ಈ ಘಟನೆ ನಡೆದಿರುವುದರಿಂದ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು. ಅಂತೆಯೇ ಈ ಪ್ರಕರಣವನ್ನು ಹೈಕೋರ್ಟ್ ನ್ಯಾಯಮೂರ್ತಿ ಅಥವಾ ರಾಷ್ಟ್ರೀಯ ತನಿಖಾ ಸಂಸ್ಥೆಯಿಂದ ತನಿಖೆ ಮಾಡಿಸಬೇಕು ಎಂದು ಒತ್ತಾಯಿಸಿದರು.

ಮಧ್ಯಪ್ರವೇಶಿಸಿದ ಬೊಮ್ಮಾಯಿ ಅವರು, ಸದರಿ ಪ್ರಕರಣ ಸಂಬಂಧ ಸಿಎಂ, ಜಿಲ್ಲಾ ಉಸ್ತುವಾರಿ ಸಚಿವರ ರಾಜೀನಾಮೆ ಕೇಳುತ್ತಿರುವುದು ಸರಿಯಲ್ಲ. ಹಿಂದಿನ ಸರ್ಕಾರದ ಅವಧಿಯಲ್ಲಿಯೂ ಸ್ಫೋಟ ಪ್ರಕರಣಗಳು ಆಗಿವೆ. ಆಗ ಅಂದಿನ ಮುಖ್ಯಮಂತ್ರಿಗಳು ರಾಜೀನಾಮೆ ನೀಡಿದ್ದರಾ? ಅಕ್ರಮ ಕಲ್ಲು ಗಣಿಗಾರಿಕೆ ನಿನ್ನೆ ಇಂದಿನದಲ್ಲ. ಮೂರು-ನಾಲ್ಕು ದಶಕಗಳಿಂದ ನಡೆಯುತ್ತಿದೆ. ಯಾರೇ ತಪ್ಪು ಮಾಡಿದ್ದರೂ ಕ್ರಮ ಕೈಗೊಳ್ಳಲಾಗುವುದು ಎಂದರು.

## ಜಾರ್ಖಂಡ್ ರೀತಿ ಗಣಿ ವಿವಿಗೆ ಚಿಂತನೆ: ಮುರುಗೇಶ್ ನಿರಾಣಿ

ವಿಧಾನ ಪರಿಷತ್: ಗಣಿಗಾರಿಕೆ ಬಗ್ಗೆ ವೈಜ್ಞಾನಿಕ ಅಧ್ಯಯನ, ತಾಂತ್ರಿಕ ಕೌಶಲ್ಯಗಳ ಬಗ್ಗೆ ತರಬೇತಿ ನೀಡುವ ಸಂಬಂಧ ಜಾರ್ಖಂಡ್ ಮಾದರಿಯಲ್ಲಿ ರಾಜ್ಯದಲ್ಲಿ 'ಗಣಿ ವಿಶ್ವವಿದ್ಯಾಲಯ' ಸ್ಥಾಪನೆಗೆ ಚಿಂತಿಸಲಾಗಿದೆ ಎಂದು ಗಣಿ ಹಾಗೂ ಭೂ ವಿಜ್ಞಾನ ಸಚಿವ ಮುರುಗೇಶ್ ನಿರಾಣಿ ಹೇಳಿದರು.



ಶಿವಮೊಗ್ಗ ಸ್ಫೋಟ ಘಟನೆ ಚರ್ಚೆ ವೇಳೆ ಸದನದಲ್ಲಿ ಈ ವಿಷಯ ತಿಳಿಸಿದ ಅವರು ಗಣಿಗಾರಿಕೆಯಲ್ಲಿ ದುಡಿಯುವ ಬಹುತೇಕರು ಅನಕ್ಷರಸ್ಥರಾಗಿದ್ದಾರೆ. ಹೀಗಾಗಿ ವೈಜ್ಞಾನಿಕ, ಕಾನೂನಾತ್ಮಕವಾಗಿ ಗಣಿಗಾರಿಕೆ ನಡೆಸುವ, ಗಣಿಗಳಲ್ಲಿ ಕೆಲಸ ಮಾಡುವ ಕುರಿತು ತರಬೇತಿ ನೀಡುವ ಉದ್ದೇಶದಿಂದ ಜಾರ್ಖಂಡ್ ಮಾದರಿಯಲ್ಲಿ ಗಣಿ ವಿಶ್ವವಿದ್ಯಾಲಯ ಸ್ಥಾಪಿಸಲು ಚಿಂತಿಸಲಾಗಿದೆ. ಈ ಸಂಬಂಧ ಮುಖ್ಯಮಂತ್ರಿಯೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಹೇಳಿದರು

ಈ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಯಾವುದೇ ಅನುದಾನ ನೀಡಲಾಗುವುದಿಲ್ಲ. ಖನಿಜ ಅಭಿವೃದ್ಧಿ ನಿಧಿ ಮತ್ತು ಗಣಿಗಳಿಂದ ಬರುವ ಆದಾಯದ ಹಣದ ಬಡ್ಡಿಯಲ್ಲಿ ವಿಶ್ವವಿದ್ಯಾಲಯದ ನಿರ್ವಹಣೆ ಮಾಡಲಾಗುತ್ತದೆ ಎಂದರು.